**ಕರ್ನಾಟಕ ಸರ್ಕಾರ**

**ಕಂದಾಯ ಇಲಾಖೆ**

**ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ದಂಡಾಧಿಕಾರಿಗಳ ಕಾರ್ಯಾಲಯ, ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ**

---

ವಿಷಯ:- ರಂಜಾನ್ ತಿಂಗಳ ಸಂದರ್ಭದಲ್ಲಿ ಕರೋನ ಕೋವಿಡ್-19 ವೈರಸ್ ಹರಡುವುದನ್ನು ತಡೆಗಟ್ಟುವ ಸಲುವಾಗಿ ದಿ:03-05-2020 ರವರೆಗೆ ಮಸೀದಿ/ದರ್ಗಾಗಳಲ್ಲಿ ಸಾಮೂಹಿಕ ಪ್ರಾರ್ಥನೆಯನ್ನು ನಿಷೇಧಿಸುವ ಬಗ್ಗೆ.

ಉಲ್ಲೇಖ: ಮಾನ್ಯ ಸರ್ಕಾರದ ಕಾರ್ಯದರ್ಶಿಗಳು ಅಲ್ಪಸಂಖ್ಯಾತರ ಕಲ್ಯಾಣ ಹಜ್ ಮತ್ತು ವಕ್ಫ್ ಇಲಾಖೆ, ಬೆಂಗಳೂರು ರವರ ಆದೇಶ ಸಂ:ಎಂ.ಡಬ್ಲ್ಯೂಡಿ/02/ ಎಂ.ಡಿ.ಎಸ್/2020 ದಿ:16-04-2020.

$$$$$$$$

**ಪ್ರಸ್ತಾವನೆ:**

ಪವಿತ್ರ ರಂಜಾನ್ ಮಾಸವು ದಿನಾಂಕ 24 ಅಥವಾ 25 ನೇ ಏಪ್ರಿಲ್ 2020 ರಿಂದ ಪ್ರಾರಂಭವಾಗಲಿದ್ದು, ರಂಜಾನ್ ಹಬ್ಬದ ಉಪವಾಸವು ಇಸ್ಲಾಂನ 5 ಮುಖ್ಯ ಸ್ಥಂಬಗಳಲ್ಲಿ ಒಂದಾಗಿದ್ದು, ಪ್ರಪಂಚದಾದ್ಯಂತ ಇದನ್ನು ಆಚರಿಸಿಕೊಂಡು ಬರಲಾಗುತ್ತಿರುತ್ತದೆ. ಈ ಸಂದರ್ಭದಲ್ಲಿ ಧಾರ್ಮಿಕ ಸ್ಥಳಗಳಾದ ಮಸೀದಿ, ದರ್ಗಾ, ಜುಮ್ಮಾ ನಮಾಜ್ ಒಳಗೊಂಡಂತೆ ಸಾಮೂಹಿಕ ಪ್ರಾರ್ಥನೆಗಳನ್ನು ಕೇಂದ್ರ ಸರ್ಕಾರವು ನಿರ್ಬಂಧಿಸಿ ಆದೇಶಿಸಿರುತ್ತದೆ. ಈ ಹಿನ್ನಲೆಯಲ್ಲಿ ಸರ್ಕಾರವು ದಿನಾಂಕ:23-03-2020 ರಂದು ಹೊರಡಿಸಿರುವ ಸುತ್ತೋಲೆಯಂತೆ ಕಡಿಮೆ ಶಬ್ದ ಹೊರಸೂಸುವ ಧ್ವನಿವರ್ಧಕಗಳನ್ನು ಬಳಸಿ ಪ್ರತಿದಿನ ಹಾಗೂ ಶುಕ್ರವಾರದ ಪ್ರಾರ್ಥನೆಯನ್ನು ಒಳಗೊಂಡಂತೆ ಪೇಶ್ ಇಮಾಮ್ಸ್, ಮೌಸಾನ್ಸ್, ಮತ್ತು ಮಸೀದಿಯ ಸಿಬ್ಬಂದಿ ಮಾತ್ರ ಪ್ರಾರ್ಥನೆ ಸಲ್ಲಿಸಲು ಅವಕಾಶ ಕಲ್ಪಿಸಲಾಗಿರುತ್ತದೆ. ಈ ಸಂದರ್ಭದಲ್ಲಿ ಸಾರ್ವಜನಿಕರು ಪಾಲ್ಗೊಳ್ಳುವಂತಿಲ್ಲವೆಂದು ನಿರ್ದೇಶಿಸಿರುತ್ತದೆ.

ಮುಖ್ಯ ಕಾರ್ಯನಿರ್ವಾಹಣಾಧಿಕಾರಿಗಳು ಕರ್ನಾಟಕ ರಾಜ್ಯ ವಕ್ಫ್ ಮಂಡಳಿ ಬೆಂಗಳೂರು ಇವರ ಆದೇಶ ಸಂಖ್ಯೆ:ಕೆ.ಎಸ್.ಡಿ.ಎ/ಎ.ಡಿ.ಎಂ/21/16-17 ದಿ:29-03-2020 ಮತ್ತು 31-03-2020 ರಲ್ಲಿ ಸಾರ್ವಜನಿಕರು ಮಸೀದಿ/ದರ್ಗಗಳಲ್ಲಿ ದಿನನಿತ್ಯದ ಪ್ರಾರ್ಥನೆ ಒಳಗೊಂಡಂತೆ ಸಾರ್ವಜನಿಕರಿಗೆ ಪ್ರವೇಶ ನಿರ್ಬಂಧಿಸುವ ಬಗ್ಗೆ ಮಸೀದಿ ಮತ್ತು ದರ್ಗಾಗಳ ವ್ಯವಸ್ಥಾಪಕರು ಮೂರು ಭಾಷೆಗಳಲ್ಲಿ ಮಸೀದಿಯ ಧ್ವನಿವರ್ಧಕಗಳ ಮೂಲಕ ದಿನಕ್ಕೆ ನಾಲ್ಕು ಬಾರಿ ಪೂರ್ವ ಮುದ್ರಿತ ಧ್ವನಿಸುರುಳಿಯನ್ನು ಪ್ರಚಾರ ಮಾಡಲು ಆದೇಶಿಸಲಾಗಿರುತ್ತದೆ.

ಇಮಾರತ್-ಎ-ಷರಿಯ ಕರ್ನಾಟಕ ಇವರು ರಾಜ್ಯದ ಎಲ್ಲಾ ಮುಸ್ಲಿಂ ಜನಾಂಗದವರಿಗೆ ರಮಾದನ್ ಸಹರಿ/ಉಪವಾಸ/ಇಫ್ತಾರ್/ ತರವೀಹ್ ಪ್ರಾರ್ಥನೆಗಳನ್ನು ಲಾಕ್‌ಡೌನ್ ಸಮಯದಲ್ಲಿ ಯಾವ ರೀತಿ ಮಾಡಬೇಕೆಂಬ ಬಗ್ಗೆ ತನ್ನ ನಿರ್ದೇಶನಗಳನ್ನು ದಿ:14-04-2020 ರಲ್ಲಿ ಕರ್ನಾಟಕ ರಾಜ್ಯದ ಎಲ್ಲಾ ಮುಸ್ಲಿಂ ಜನಾಂಗದವರಿಗೆ ಸೂಚನೆಗಳನ್ನು ನೀಡಲಾಗಿರುತ್ತದೆ.

ಮುಖ್ಯ ಕಾರ್ಯನಿರ್ವಾಹಣಾಧಿಕಾರಿಗಳು ಕರ್ನಾಟಕ ರಾಜ್ಯ ವಕ್ಫ್ ಮಂಡಳಿ ಬೆಂಗಳೂರು ಇವರು ಈಗಾಗಲೇ ಮಸೀದಿ ಮತ್ತು ದರ್ಗಾಗಳಲ್ಲಿ ಸಾಮೂಹಿಕ ಪ್ರಾರ್ಥನೆಗಳನ್ನು ದಿ:14-04-2020 ರವರೆಗೆ ನಿರ್ಬಂಧಿಸಿ ಆದೇಶಿಸಿರುತ್ತಾರೆ. ಲಾಕ್‌ಡೌನ್ ಅವಧಿಯನ್ನು ದಿ:03-05-2020 ರವರೆಗೆ ವಿಸ್ತರಿಸಿರುವುದರಿಂದ ಪವಿತ್ರ ರಂಜಾನ್ ಆಚರಿಸುವ ಸಂಬಂಧ ಸರ್ಕಾರವು ಉಲ್ಲೇಖಿತ ಆದೇಶದಲ್ಲಿ ಕೆಲವೊಂದು ನಿರ್ದೇಶನಗಳನ್ನು ನೀಡಿದ್ದು, ಅದರನ್ವಯ ಈ ಕೆಳಕಂಡಂತೆ ಆದೇಶಿಸಿದೆ.

**:ಆದೇಶ:**

**ಸಂಖ್ಯೆಎಂ.ಎ.ಜಿ(3) ಸಿಆರ್- 144/2019-20 ದಿನಾಂಕ:18-04-2020.**

ಪ್ರಸ್ತಾವನೆಯಲ್ಲಿ ವಿವರಿಸಿದ ಕಾರಣಗಳ ಹಿನ್ನಲೆಯಲ್ಲಿ ಆರ್.ವಿನೋತ್ ಪ್ರಿಯಾ, ಭಾ.ಆ.ಸೇ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ, ಚಿತ್ರದುರ್ಗ ಜಿಲ್ಲೆ ಆದ ನಾನು ಚಿತ್ರದುರ್ಗ ಜಿಲ್ಲೆಯಾದ್ಯಂತ ಕೋವಿಡ್-19 ಕರೋನ ವೈರಸ್ಸ್ ಸೋಂಕು ಹರಡದಂತೆ ಸಾರ್ವಜನಿಕರ ಆರೋಗ್ಯದ ಹಿತದೃಷ್ಟಿಯಿಂದ ಪರಿಣಾಮಕಾರಿಯಾಗಿ ಸೂಕ್ತ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳುವ ಸಂಬಂದ ಸಿ.ಆರ್.ಪಿ.ಸಿ ಕಲಂ 144(3) ರಡಿಯಲ್ಲಿ ಪ್ರದತ್ತವಾಗಿರುವ ಅಧಿಕಾರವನ್ನು ಚಲಾಯಿಸಿ ಚಿತ್ರದುರ್ಗ ಜಿಲ್ಲೆಯಾದ್ಯಂತ ಬರುವ ಎಲ್ಲಾ ಬಗೆಯ ದೈನಂದಿನ ಮತ್ತು ರಂಜಾನ್ ಮಾಸದ ಸಾಮೂಹಿಕ ಪ್ರಾರ್ಥನೆಗಳನ್ನು ಸಾರ್ವಜನಿಕ ಹಿತದೃಷ್ಟಿಯಿಂದ ತಕ್ಷಣದಿಂದ ಜಾರಿಗೆ ಬರುವಂತೆ ಈ ಕೆಳಕಂಡ ನಿಬಂಧನೆಗಳನ್ನು ವಿಧಿಸಿ ದಿನಾಂಕ:03-05-2020 ರ ಮಧ್ಯರಾತ್ರಿ 12-00 ಗಂಟೆವರೆಗೆ ನಿಷೇಧಿಸಿ ಆದೇಶ ಹೊರಡಿಸಿದೆ.

--2

Scanned by CamScanner

1) 5 ಹೊತ್ತಿನ ಪಾರ್ಥನೆಯನ್ನು ಶುಕ್ರವಾರದ ಪ್ರಾರ್ಥನೆಯನ್ನು ಸಹ ಒಳಗೊಂಡಂತೆ ಮತ್ತು ತರಾವ್ಹಿ ನಮಾಜ್ ಅನ್ನು ತಮ್ಮ ತಮ್ಮ ಮನೆಗಳಲ್ಲಿ ಮಾಡಿಕೊಳ್ಳುವುದು. ಮಸೀದಿಗಳಲ್ಲಿ ಪೇಶ್‌ಇಮಾಮ್, ಮೌಝಿನ್‌ರವರು ಮತ್ತು ಸಿಬ್ಬಂದಿ ವರ್ಗದವರು ಮಾತ್ರ ಸಾರ್ವಜನಿಕ ಅಂತರ ಕಾಯ್ದಿರಿಸಿಕೊಂಡು ಪ್ರಾರ್ಥನೆಯನ್ನು ಮಾಡುವುದು.
2) ಮಸೀದಿಗಳಲ್ಲಿ ಧ್ವನಿವರ್ಧಕದ ಮೂಲಕ ಸಾರ್ವಜನಿಕರಿಗೆ ಯಾವುದೇ ಪ್ರವಚನಗಳನ್ನು ಆಯೋಜಿಸುವಂತಿರುವುದಿಲ್ಲ. ಹಾಗೂ ಕಡಿಮೆ ಡೆಸಿಬಲ್‌ನಲ್ಲಿ ಧ್ವನಿ ವರ್ಧಕದ ಮೂಲಕ ಅಝಾನ್ ನೀಡುವುದು. ಸಹರಿ ಮತ್ತು ಇಫ್ತಾರ್ ಸಮಯವನ್ನು ಜನರಿಗೆ ಧ್ವನಿವರ್ಧಕದ ಧ್ವನಿ ಕಡಿಮೆಗೊಳಿಸಿ ತಿಳಿಸಬೇಕು.
3) ಯಾವುದೇ ಇಫ್ತಾರ್ ಮತ್ತು ಸಾಮೂಹಿಕ ಬೋಜನ ಕೂಟ ಆಯೋಜಿಸುವಂತಿಲ್ಲ.
4) ಸಹರಿ ಮತ್ತು ಇಫ್ತಾರ್ ಮನೆಗಳಲ್ಲಿಯೇ ನಿರ್ವಹಿಸತಕ್ಕದ್ದು.
5) ಮಸೀದಿ ಮತ್ತು ಮೊಹಲ್ಲಾಗಳಲ್ಲಿ ತಂಪು ಪಾನೀಯ, ಗಂಜಿ ಮತ್ತು ಇತರೆ ಯಾವುದೇ ತಿಂಡಿ ತಿನಿಸುಗಳನ್ನು/ ಪಾನೀಯಗಳನ್ನು ತಯಾರಿಸುವಂತಿಲ್ಲ ಹಾಗೂ ವಿತರಿಸುವಂತಿಲ್ಲ.
6) ಮಸೀದಿ/ದರ್ಗಾಗಳ ಸುತ್ತಮುತ್ತ ಯಾವುದೇ ಉಪಹಾರ ಅಂಗಡಿ ಹಾಕುವುದನ್ನು ನಿಷೇಧಿಸಲಾಗಿದೆ.

ಸಾರ್ವಜನಿಕರ ಆರೋಗ್ಯ ದೃಷ್ಟಿಯಿಂದ ಮೇಲ್ಕಂಡ ಆದೇಶವನ್ನು ಉಲ್ಲಂಘಿಸಿದವರ ವಿರುದ್ಧ ವಕ್ಫ್ ಆಕ್ಟ್–1995 ರಡಿಯಲ್ಲಿ ಕ್ರಮ ಕೈಗೊಳ್ಳಲಾಗುವುದು.

(ಆರ್.ವಿನೋತ್ ಪ್ರಿಯಾ)
ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ದಂಡಾಧಿಕಾರಿಗಳು
ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ.

**ಪ್ರತಿಯನ್ನು, ಈ ಕೆಳಕಂಡವರಿಗೆ ಅಧಿಕಾರಿಗಳಿಗೆ ಸೂಕ್ತ ಕ್ರಮಕ್ಕಾಗಿ :–**

1) ಮಾನ್ಯ ಅಪರ ಮುಖ್ಯ ಕಾರ್ಯದರ್ಶಿಗಳು, ಒಳಾಡಳಿತ ಮತ್ತು ಸಾರಿಗೆ ಇಲಾಖೆ, ವಿಧಾನಸೌಧ, ಬೆಂಗಳೂರು ಬೆಂಗಳೂರು ಇವರಿಗೆ ಮಾಹಿತಿಗಾಗಿ ಸಲ್ಲಿಸಿದೆ.
2) ನಿರ್ದೇಶಕರು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು ಕರ್ನಾಟಕ ಸರ್ಕಾರ ಆನಂದ ರಾವ್ ವೃತ್ತ ಬೆಂಗಳೂರು ಇವರಿಗೆ ಮಾಹಿತಿಗಾಗಿ ಸಲ್ಲಿಸಿದೆ.
3) ಮಾನ್ಯ ಪ್ರಾದೇಶಿಕ ಆಯುಕ್ತರು ಬೆಂಗಳೂರು ವಿಭಾಗ ಬೆಂಗಳೂರು ಇವರಿಗೆ ಮಾಹಿತಿಗಾಗಿ ಸಲ್ಲಿಸಿದೆ.
4) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್ ಚಿತ್ರದುರ್ಗ ಇವರಿಗೆ ಮಾಹಿತಿಗಾಗಿ.
5) ಪೊಲೀಸ್ ಅಧೀಕ್ಷಕರು, ಚಿತ್ರದುರ್ಗ ಇವರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
6) ಉಪವಿಭಾಗಾಧಿಕಾರಿಗಳು, ಚಿತ್ರದುರ್ಗ ಉಪವಿಭಾಗ ರವರಿಗೆ ಮಾಹಿತಿಗಾಗಿ.
7) ಯೋಜನಾ ನಿರ್ದೇಶಕರು, ಜಿಲ್ಲಾ ಪಂಚಾಯತ್ ಚಿತ್ರದುರ್ಗ ರವರಿಗೆ ಮಾಹಿತಿಗಾಗಿ ಹಾಗೂ ಅಗತ್ಯ ಕ್ರಮಕ್ಕಾಗಿ.
8) ಜಿಲ್ಲಾ ಅಧಿಕಾರಿಗಳು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಚಿತ್ರದುರ್ಗ ಇವರಿಗೆ ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ ಕಳುಹಿಸಿದೆ.
9) ಜಿಲ್ಲಾ ವಕ್ಫ್ ಅಧಿಕಾರಿಗಳು, ಚಿತ್ರದುರ್ಗ.
10) ಜಿಲ್ಲೆಯ ಎಲ್ಲಾ ತಾಲ್ಲೂಕು ದಂಡಾಧಿಕಾರಿಗಳಿಗೆ.
11) ವಾರ್ತಾ ಮತ್ತು ಪ್ರಚಾರಾಧಿಕಾರಿಗಳು, ಚಿತ್ರದುರ್ಗ ಇವರಿಗೆ ರವಾನಿಸುತ್ತಾ ಮೇಲ್ಕಂಡ ಆದೇಶವನ್ನು ಜಿಲ್ಲೆಯಲ್ಲಿನ ಎಲ್ಲಾ ಸ್ಥಳೀಯ ದಿನಪತ್ರಿಕೆಗಳಲ್ಲಿ ಸರ್ಕಾರಕ್ಕೆ ಯಾವುದೇ ವೆಚ್ಚ ಬಾರದಂತೆ ಪ್ರಕಟಿಸಲು ಅಗತ್ಯ ಕ್ರಮ ಕೈಗೊಳ್ಳಲು ಸೂಚಿಸಿದೆ.

Scanned by CamScanner